# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/50/2022-23

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ-ವಿಭಾಗ, ಪೂರ್ವ ವಲಯ .
ವಿ. ನಾಗೇನಹಳ್ಳಿ, ವಾರ್ಡ್ ನಂ;22
ಬೆಂಗಳೂರು – 560032.
ದಿನಾಂಕ: 21-05-2022

## ದಿನಾಂಕ; 21-05-2022 ರಂದು ವಾರ್ಡ್ ಸಮಿತಿ ಸಭೆಯ ನಡವಳಿಗಳು;-

- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ ರವರು
- ಶ್ರೀಮತಿ. ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ ನಿರ್ವಹಣೆ
- ಶ್ರೀ. ಮುನಿರಾಮಣ್ಣ, ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು
- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಭದ್ರಪ್ಪ, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಸದಸ್ಯರು
- ಶ್ರೀ. ಪ್ರತಾಪ್, J.E ಬೆಸ್ಕಾಂ ಹೆಬ್ಬಾಳ ವಿಭಾಗ,
- ಶ್ರೀಮತಿ. ರಾಜೇಶ್ವರಿ, ಸರ್ಕಾರಿ ಆಸ್ಪತ್ರೆ, ಆರೋಗ್ಯ ಪರೀವೀಕ್ಷಕರು(TBHV)
- ಕುಮಾರಿ. ನವ್ಯ, ಸರ್ಕಾರಿ ಆಸ್ಪತ್ರೆ ಸಿಬ್ಬಂದಿ (ನರ್ಸ್)
- ಶ್ರೀ. ಗೋವಿಂದ ಗೌಡ್ರು, ನಾಗರೀಕರು ದೊಡ್ಡಮ್ಮ ಲೇಔಟ್,
- ಶ್ರೀ. ಬೆನ್ನಿ ಸಬಾಸ್ಟಿನ್, ನಾಗರೀಕರು ಸನ್ ರೈಸ್ ಕಾಲೋನಿ
- ಶ್ರೀಮತಿ. ಜೆಸಿನ್ತಾ, ನಾಗರೀಕರು ಸನ್ ರೈಸ್ ಕಾಲೋನಿ
- ಶ್ರೀಮತಿ. ಎ.ಕೆ ಪ್ರೇಮ ಕುಮಾರಿ, ನಾಗರೀಕರು ಸನ್ ರೈಸ್ ಕಾಲೋನಿ
- ಶ್ರೀಮತಿ ನೆನ್ಸೂ ರವಿ, ನಾಗರೀಕರು ಸನ್ ರೈಸ್ ಕಾಲೋನಿ

Bruhat Bengaluru
Mahanagara Palike

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ: 22ರ ನಾಗರೀಕರು ಹಾಗೂ ಎಲ್ಲ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ಗುರುಸಿದ್ದಪ್ಪ. ಜಿ ವಾರ್ಡ್ ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು, ಹಾಗೂ ದಿನಾಂಕ: 28-04-2022 ರಂದು ನಡೆದ ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀ. ಮುನಿರಾಮಣ್ಣ, ವಾರ್ಡ್ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ವಾರ್ಡ್‌ನ Dumping yardನ ಹತ್ತಿರ ಕಸದ ಸಮಸ್ಯೆ ಹೆಚ್ಚಾಗಿರುವುದರಿಂದ ಅದನ್ನು ಶೀಘ್ರವಾಗಿ ಸರಿಪಡಿಸುವಂತೆ ತಿಳಿಸಿದರು. ಹಾಗೂ ವಾರ್ಡ್‌ನಲ್ಲಿ ಮತ್ತೆ ಕೋವಿಡ್ +veಕೇಸ್‌ಗಳು ಹೆಚ್ಚಾಗುವ ಸಾಧ್ಯತೆಗಳಿರುವುದರಿಂದ ಅದಕ್ಕೆ ಸಂಬಂಧಪಟ್ಟಂತೆ ಕೋವಿಡ್ ಕೇಸ್‌ಗಳನ್ನು ತಡೆಗಟ್ಟುವಂತೆ ಮುಂಜಾಗ್ರತೆ ಕ್ರಮಕೈಗೊಳ್ಳುವಂತೆ ತಿಳಿಸಿದರು.
- ಶ್ರೀಮತಿ ಪ್ರೇಮ ಕುಮಾರಿ, ನಾಗರೀಕರು ಮಾತನಾಡುತ್ತಾ, ಸನ್‌ರೈಸ್ ಕಾಲೋನಿಯ 1ನೇ ಅಡ್ಡರಸ್ತೆಯಲ್ಲಿ ಒಣಮರಗಳಿರುವುದರಿಂದ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ ಕೂಡಲೇ ಒಣಮರಗಳನ್ನು ತೆರವುಗೊಳಿಸುವಂತೆ ತಿಳಿಸಿದರು.
- ಸನ್‌ರೈಸ್ ಕಾಲೋನಿಯ ಅಡ್ಡರಸ್ತೆ ಹಾಗೂ ಮುಖ್ಯರಸ್ತೆಗಳಲ್ಲಿ ಸಿ.ಸಿ.ಟಿ.ವಿ ಕ್ಯಾಮರಾಗಳು ಸರಿಯಾಗಿ ಕಾರ್ಯ ನಿರ್ವಹಿಸದೇ ಇರುವುದರಿಂದ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ ಅದನ್ನು ಕೂಡಲೇ ಸರಿಪಡಿಸುವಂತೆ ತಿಳಿಸಿದರು. ಹಾಗೂ ರಸ್ತೆಯಲ್ಲಿ Street light ಗಳು ಹಾಳಾಗಿರುವುದರಿಂದ ಶೀಘ್ರವಾಗಿ ಅದನ್ನು ಸರಿಪಡಿಸುವಂತೆ ತಿಳಿಸಿದರು
- ಶ್ರೀ. ಉದಯ್ ಚಂದನ್, ಕೆ.ಆರ್.ಡಬ್ಲ್ಯು.ಎ ಸದಸ್ಯರು ಮಾತನಾಡುತ್ತಾ, 1ನೇ 'ಎ' ಕ್ರಾಸ್ ಮತ್ತು 9ನೇ ಕ್ರಾಸ್ ಕನಕನಗರದ ರಸ್ತೆಯಲ್ಲಿ Street light ಹಾಳಾಗಿರುವುದರಿಂದ ಕೂಡಲೇ ಬೆಸ್ಕಾಂ ಇಲಾಖೆಗೆ ತಿಳಿಸಿ ಅದನ್ನು ಸರಿಪಡಿಸುವಂತೆ ತಿಳಿಸಿದರು. ಈಗಾಗಲೇ ಅವುಗಳನ್ನು ಸರಿಪಡಿಸಿರುವುದಾಗಿ ತಿಳಿಸಿದರು. ಈಗಾಗಲೇ Street light ಗಳನ್ನು ಸರಿಪಡಿಸಿರುವುದಾಗಿ ತಿಳಿಸಿದರು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ವಾರ್ಡಿನಲ್ಲಿ ಕೋವಿಡ್ +ve ಕೇಸ್‌ನ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ತಪ್ಪದೇ ಮಾಸ್ಕ್ ಧರಿಸುವುದು ಮತ್ತು ಸ್ಯಾನಿಟೈಸರ್ ಬಳಸುವ ಬಗ್ಗೆ ಮುನ್ನೆಚ್ಚರಿಕೆ ಕ್ರಮವಹಿಸಿರುವುದಾಗಿ ತಿಳಿಸಿದರು. ಅದರಂತೆ 12 ರಿಂದ 14 ವರ್ಷದ ಮಕ್ಕಳಿಗೆ ಈಗಾಗಲೇ 80% ರಿಂದ 90%

ನಷ್ಟು ವ್ಯಾಕ್ಸಿನೇಶನ್ ನೀಡುವುದು ಮತ್ತು ವಾರ್ಡಿನಲ್ಲಿ ಔಷಧ ಸಿಂಪಡಣೆ (Fogging spray) ಮಾಡುವ ಬಗ್ಗೆ ದೂರವಾಣಿ ಮೂಲಕ (ರಜೆ ಇದ್ದುದ್ದರಿಂದ) ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತ್ತು.

- ವಾರ್ಡಿನ ವ್ಯಾಪ್ತಿಯಲ್ಲಿ ಡೆಂಗ್ಯೂ ಹಾಗೂ ಮಲೇರಿಯಾ ರೋಗ ಹೆಚ್ಚಾಗುತ್ತಿರುವುದರಿಂದ ಅದನ್ನು ತಡೆಗಟ್ಟುವಂತೆ ಸೂಕ್ತ ಕ್ರಮಕೈಗೊಳ್ಳುತ್ತೀರುವ ಬಗ್ಗೆ ತಿಳಿಸಿದರು. ಹಾಗೂ 60 ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ ಸರ್ಕಾರಿ ಆಸ್ಪತ್ರೆಯಲ್ಲಿ ಬೂಸ್ಟರ್ ಡೋಸ್‌ಗಳನ್ನು ನೀಡುತ್ತಿರುವುದಾಗಿ ತಿಳಿಸಿದರು. ಹಾಗೂ 60 ವರ್ಷಕ್ಕಿಂತ ಕೆಳಗಿನವರಿಗೆ ಅಗತ್ಯವಿದ್ದರೆ ಖಾಸಗಿ ಆಸ್ಪತ್ರೆಗಳಲ್ಲಿ ಬೂಸ್ಟರ್ ಡೋಸ್ ತೆಗೆದುಕೊಳ್ಳಬಹುದಾಗಿ ತಿಳಿಸಿದರು
- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡಿನಲ್ಲಿ ಕಸದ ನಿರ್ವಹಣೆ ಸರಿಯಾದ ರೀತಿಯಲ್ಲಿ ಮಾಡುತ್ತೀರುವ ಬಗ್ಗೆ ತಿಳಿಸಿದರು.
- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಅಲ್ಲಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ವೆಟ್ ಮಿಕ್ಸ್ ಮತ್ತು ಡಾಂಬರು ಮಿಶ್ರಿತ ಜಲ್ಲಿಕಲ್ಲುಗಳಿಂದ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಕೂಡಲೇ ಪ್ರಾರಂಭಿಸುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು.
- ಶ್ರೀಮತಿ ಮರಿಯಮ್ಮ, ನಾಗರೀಕರು ಮಾತನಾಡುತ್ತಾ, ವಿ. ನಾಗೇನಹಳ್ಳಿಯ ಪಟೇಲ್ ಮುನಿಯಪ್ಪ ಲೇಔಟ್‌ನ 2ನೇ ಅಡ್ಡರಸ್ತೆ ಮತ್ತು ಮುಖ್ಯರಸ್ತೆಯಲ್ಲಿ ಅಡ್ಡಮೋರಿಯನ್ನು ಸ್ವಚ್ಛಗೊಳಿಸುವಂತೆ ತಿಳಿಸಿದರು. ಈಗಾಗಲೇ ಅಡ್ಡಮೋರಿ ರಸ್ತೆಯನ್ನು ಸ್ವಚ್ಛಗೊಳಿಸಿರುವುದಾಗಿ ತಿಳಿಸಿದರು.
- ಶ್ರೀಮತಿ ರಾಜೇಶ್ವರಿ, ಸರ್ಕಾರಿ ಆಸ್ಪತ್ರೆ ಕ್ಷಯ ರೋಗದ ಆರೋಗ್ಯ ಪರೀವೀಕ್ಷಕರು ಮಾತನಾಡುತ್ತಾ, ವಾರ್ಡಿನಲ್ಲಿ ಕ್ಷಯ ರೋಗವು ಕಂಡು ಬರುವ ಸಾಧ್ಯತೆಗಳಿರುವುದರಿಂದ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮವಹಿಸುವುದು, ಹಾಗೂ ಆರೋಗ್ಯದ ಬಗ್ಗೆ ತಪ್ಪದೇ ಕಾಳಜಿವಹಿಸಬೇಕೆಂದು ತಿಳಿಸಿದರು.
- ಕ್ಷಯ ರೋಗವು ಗಾಳಿಯಲ್ಲಿ ಹರಡುವುದರಿಂದ ಎರಡು ವಾರಕ್ಕಿಂತ ಹೆಚ್ಚಾಗಿ ಕೆಮ್ಮು ಇದ್ದರೆ, ಕೆಲವು ವೇಳೆ ಕಫದ ಜೊತೆಗೆ ರಕ್ತ ಕಾಣಿಸುವುದು, ಜ್ವರ, ತೂಕದ ಇಳಿಕೆ, ಹಸಿವಾಗದಿರುವುದು ಹಾಗೂ ರಾತ್ರಿ ವೇಳೆಯಲ್ಲಿ ಬೆವರುವುದು ಈ ರೀತಿಯಾದ ಯಾವುದೇ ರೋಗದ ಲಕ್ಷಣ ಕಂಡು ಬಂದಲ್ಲಿ ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರದಲ್ಲಿ ಉಚಿತ ಚಿಕಿತ್ಸೆ ಪಡೆದುಕೊಳ್ಳಬಹುದು ಹಾಗೂ ಕ್ಷಯ ರೋಗವು ಹರಡದಂತೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ನಡೆಸುತ್ತೀರುವ ಬಗ್ಗೆ ತಿಳಿಸಿದರು.
- ಶ್ರೀ. ಗೋವಿಂದ ಗೌಡ್ರು, ನಾಗರೀಕರು ಮಾತನಾಡುತ್ತಾ, ಸಿ.ಪಿ.ಎಲ್ ಲೇಔಟ್‌ನ 1ನೇ, 2ನೇ ಹಾಗೂ 8ನೇ ಅಡ್ಡರಸ್ತೆಯಲ್ಲಿ ಮಳೆಯಿಂದ ರಸ್ತೆಯಲ್ಲಿ ನೀರಿನ ಸಮಸ್ಯೆ ಎದುರಿಸುತ್ತಿದ್ದು, ಶೀಘ್ರವಾಗಿ ಅದನ್ನು ಸರಿಪಡಿಸುವಂತೆ ತಿಳಿಸಿದರು.
- ಶ್ರೀಮತಿ ಜೆಸೆನ್ತಾ, ನಾಗರೀಕರು ಮಾತನಾಡುತ್ತಾ, ಸನ್ ರೈಸ್ ಕಾಲೋನಿಯ 1ನೇ ಅಡ್ಡರಸ್ತೆಯ ಕಟ್ಟಡಗಳ ಬಳಿ ಹೆಚ್ಚಾಗಿ ಉಳಿದ ಕಲ್ಲು ಮಣ್ಣುಗಳನ್ನು ತೆರವುಗೊಳಿಸಿ ರಸ್ತೆಯನ್ನು ಸ್ವಚ್ಛಗೊಳಿಸುವಂತೆ ತಿಳಿಸಿದರು.

Bruhat Bengaluru Mahanagara Palike

- ಶ್ರೀ ಬೆನ್ನಿ ಸಬಾಸ್ಟಿನ್, ನಾಗರೀಕರು ಮಾತನಾಡುತ್ತಾ, ಸಿ.ಐ.ಎಲ್ ಲೇಔಟ್‌ನ 1ನೇ ಅಡ್ಡರಸ್ತೆಯಲ್ಲಿ ಅಡ್ಡಮೋರಿಯನ್ನು ಸ್ವಚ್ಛಗೊಳಿಸುವಂತೆ ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳ ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಛಾಯಾಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 01:25ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| | (ಗುರುಸಿದ್ದಪ್ಪ .ಜಿ) |
| ನೋಡೆಲ್ ಅಧಿಕಾರಿಗಳು | ವಾರ್ಡ್ ಸಮಿತಿ ಕಾರ್ಯದರ್ಶಿ |
| ಹಾಗೂ | ಹಾಗೂ |
| ವಾರ್ಡ್ ಸಮಿತಿ ಅಧ್ಯಕ್ಷರು | ಸಹಾಯಕ ಅಭಿಯಂತರರು ವಾರ್ಡ್ ನಂ:22 |